ಗುರುವಾರ 30.10.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 85
Digital Varthe Kannada Daily
Volume 01 - Issue 85
Thursday
30.10.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ಕಾರ್ ಮಿರರ್‌ಗೆ ಬೈಕ್ ಟಚ್ ಆಗಿದ್ದಕ್ಕೆ ಯುವಕನನ್ನು ಹತ್ಯೆಗೈದ ದಂಪತಿಗಳು




ಆರೋಪಿಗಳಾದ ಮನೋಜ್ ಕುಮಾರ್, ಆರತಿ ಶರ್ಮಾ



ಮೃತ ದರ್ಶನ್

**ಬೆಂಗಳೂರು:** ಪುಟ್ಟೇನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಒಂದು ಭಯಾನಕ ರೋಡ್ ರೇಜ್ ಘಟನೆ ಇಡೀ ನಗರವನ್ನೇ ಬೆಚ್ಚಿಬಿಟ್ಟಿದೆ. ಕಾರಿನ ಸೈಡ್ ಮಿರರ್‌ಗೆ ಬೈಕ್ ಟಚ್ ಆಗಿದ್ದಕ್ಕೆ ಕೋಪಗೊಂಡ ದಂಪತಿ ಜೋಡಿ, ಬೈಕ್ ಸವಾರನನ್ನು ಎರಡು ಕಿಲೋಮೀಟರ್ ದೂರ ಚೇಸ್ ಮಾಡಿ, ಕಾರಿನಿಂದ ಗುದ್ದಿ ಹತ್ಯೆ ಮಾಡಿದ ಆರೋಪದಲ್ಲಿ ಅರೆಸ್ಟ್ ಆಗಿದ್ದಾರೆ. ದಂಪತಿಗಳಾದ ಮನೋಜ್ ಕುಮಾರ್ ಮತ್ತು ಆರತಿ ಶರ್ಮಾ ಎಂದು ತಿಳಿದು ಬಂದಿದೆ. ಈ ಘಟನೆಯಲ್ಲಿ ದರ್ಶನ್ ಎಂಬ ಯುವಕ ಮೃತಪಟ್ಟಿದ್ದು, ಅವನ ಸ್ನೇಹಿತ ವರುಣ್ ಗಂಭೀರವಾಗಿ ಗಾಯಗೊಂಡಿದ್ದಾನೆ. ಪೊಲೀಸರು ಆರೋಪಿಗಳನ್ನು ಬಂಧಿಸಿದ್ದು, ತನಿಖೆಯಿಂದ ಕೊಲೆಯ ಸತ್ಯ ಬಯಲಾಗಿದೆ.

ಈ ಘಟನೆ ಅಕ್ಟೋಬರ್ 22 ರಂದು ರಾತ್ರಿ 11:30ರ ಸುಮಾರಿಗೆ ಶ್ರೀರಾಮ ಲೇಔಟ್‌ನಲ್ಲಿ ನಡೆದಿದೆ. ದರ್ಶನ್ ಮತ್ತು ವರುಣ್ ತಮ್ಮ ಬೈಕ್‌ನಲ್ಲಿ ಹೋಗುತ್ತಿದ್ದಾಗ, ಅವರ ಬೈಕ್, ಮನೋಜ್ ಮತ್ತು ಆರತಿ ಶರ್ಮಾ ದಂಪತಿಗಳ ಕಾರಿನ ಮಿರರ್‌ಗೆ ತಗುಲಿದೆ. ಇದರಿಂದ ಒಡೆದುಹೋಗಿದ್ದ ಮಿರರ್‌ಗೆ ಸಿಟ್ಟಾದ ದಂಪತಿಗಳು, ಯುವಕರನ್ನು ಎರಡು ಕಿಲೋಮೀಟರ್‌ಗೂ ಹೆಚ್ಚು ಚೇಸ್ ಮಾಡಿದ್ದಾರೆ. ಕೋಪದ ರಭಸಕ್ಕೆ ಕಾರಿನಿಂದ ಬೈಕ್‌ಗೆ ಡಿಕ್ಕಿ ಹೊಡೆದಿದ್ದಾರೆ. ಈ ಡಿಕ್ಕಿಯ ರಭಸಕ್ಕೆ ದರ್ಶನ್ ಮತ್ತು ವರುಣ್ ರಸ್ತೆಗೆ ಹಾರಿ ಬಿದ್ದಿದ್ದಾರೆ. ಗಂಭೀರವಾಗಿ ಗಾಯಗೊಂಡ ದರ್ಶನ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಸಾವನ್ನಪ್ಪಿದ್ದಾನೆ. ವರುಣ್ ಗಾಯಗಳಿಂದ ಬಳಲುತ್ತಿದ್ದಾನೆ.

ಆರಂಭದಲ್ಲಿ ಈ ಘಟನೆಯನ್ನು ಜೆ.ಪಿ. ನಗರ ಸಂಚಾರ ಪೊಲೀಸ್ ಠಾಣೆಯಲ್ಲಿ ಕೇವಲ ಅಪಘಾತ ಎಂದು ದಾಖಲಿಸಲಾಗಿತ್ತು. ಆದರೆ, ಪುಟ್ಟೇನಹಳ್ಳಿ ಪೊಲೀಸರ ತನಿಖೆಯಿಂದ ಇದು ಉದ್ದೇಶಪೂರ್ವಕ ಕೊಲೆ ಎಂಬ ಸತ್ಯ ಬಯಲಾಯಿತು. ತನಿಖೆಯ ವೇಳೆ ಆರೋಪಿಗಳಾದ ಮನೋಜ್ ಮತ್ತು ಆರತಿ, ದರ್ಶನ್ ಮತ್ತು ವರುಣ್ ಕಾರಿನ ಮಿರರ್‌ಗೆ ಉದ್ದೇಶಪೂರ್ವಕವಾಗಿ ಡಿಕ್ಕಿ ಹೊಡೆದಿದ್ದಾರೆ ಎಂಬುದಾಗಿ ತಿಳಿದುಬಂದಿದೆ. ಇದೇ ಕಾರಣಕ್ಕೆ ದಂಪತಿಗಳು ಯುವಕರನ್ನು ಚೇಸ್ ಮಾಡಿ, ಒಮ್ಮೆ ತಪ್ಪಿಸಿಕೊಂಡ ಬಳಿಕ ಯೂ-ಟರ್ನ್ ಮಾಡಿ ಮತ್ತೆ ಬಂದು ಕಾರಿನಿಂದ ಡಿಕ್ಕಿ ಹೊಡೆದಿದ್ದಾರೆ.

ಈ ಡಿಕ್ಕಿಯಿಂದ ದರ್ಶನ್‌ಗೆ ಗಂಭೀರ ಗಾಯಗಳಾಗಿ, ಚಿಕಿತ್ಸೆ ಫಲಿಸದೆ ಸಾವನ್ನಪ್ಪಿದ್ದಾನೆ. ಕೊಲೆಯಾದ ಬಳಿಕ ಆರೋಪಿಗಳು ಸ್ಥಳದಿಂದ ಎಸ್ಕೇಪ್ ಆಗಿದ್ದರು. ಆದರೆ, ಕಾರಿನ ಕೆಲವು ಭಾಗಗಳು ರಸ್ತೆಯಲ್ಲಿ ಬಿದ್ದಿದ್ದವು. ಇದನ್ನು ತೆಗೆದುಕೊಳ್ಳಲು ದಂಪತಿಗಳು ಮುಖಕ್ಕೆ ಮಾಸ್ಕ್ ಧರಿಸಿ ಮರಳಿ ಸ್ಥಳಕ್ಕೆ ಬಂದಿದ್ದರು. ಆದರೆ, ಪೊಲೀಸರ ತನಿಖೆಯಿಂದ ಈ ಎಲ್ಲ ವಿವರಗಳು ಬಯಲಾಗಿದ್ದು, ಆರೋಪಿಗಳಾದ ಮನೋಜ್ ಕುಮಾರ್ ಮತ್ತು ಆರತಿ ಶರ್ಮಾರನ್ನು ಪುಟ್ಟೇನಹಳ್ಳಿ ಪೊಲೀಸರು ಬಂಧಿಸಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ ಕೊಲೆ ಪ್ರಕರಣ ದಾಖಲಾಗಿದೆ.

## 25 ರಿಂದ 35 ಲಕ್ಷಕ್ಕೆ ಸರ್ಕಾರಿ ಹುದ್ದೆ ಮಾರಾಟ: ತನಿಖೆ ನಡೆಸಲು ತ.ನಾಡು ಪೊಲೀಸರಿಗೆ ಇಡಿ ಪತ್ರ



**ಚೆನ್ನೈ:** ತಮಿಳುನಾಡು ಪುರಸಭೆ ಆಡಳಿತ ಮತ್ತು ನೀರು ಸರಬರಾಜು ಇಲಾಖೆ ಯಲ್ಲಿ ಸರ್ಕಾರಿ ಹುದ್ದೆಗಳಿಗೆ ಲಂಚ ಪಡೆಯಲಾಗಿದೆ ಎಂದು ಜಾರಿ ನಿರ್ದೇಶನಾಲಯ ಗಂಭೀರ ಆರೋಪ ಮಾಡಿದೆ.

ರಿಯಲ್ ಎಸ್ಟೇಟ್ ಸಂಸ್ಥೆ ಟಿವಿಹೆಚ್ ಮತ್ತು ಡಿಎಂಕೆ ಸಚಿವ ಕೆ.ಎನ್. ನೆಹರು ಅವರ ಸಂಬಂಧಿ ಒಳಗೊಂಡ ಬ್ಯಾಂಕ್ ವಂಚನೆ ಪ್ರಕರಣಕ್ಕೆ ಸಂಬಂಧಿಸಿದ ದಾಳಿಯ ಸಂದರ್ಭದಲ್ಲಿ ಈ ಹಗರಣ ಬೆಳಕಿಗೆ ಬಂದಿದೆ ಎಂದು ತಮಿಳುನಾಡು ಪೊಲೀಸರಿಗೆ ಇಡಿ ತಿಳಿಸಿದೆ

ಸಹಾಯಕ ಎಂಜಿನಿಯರ್‌ಗಳು, ಜೂನಿಯರ್ ಎಂಜಿನಿಯರ್‌ಗಳು ಮತ್ತು ಪಟ್ಟಣ ಯೋಜನಾ ಅಧಿಕಾರಿಗಳಂತಹ ಹುದ್ದೆಗಳನ್ನು ಪಡೆಯಲು ಅಭ್ಯರ್ಥಿಗಳು 25 ಲಕ್ಷದಿಂದ 35 ಲಕ್ಷ ರೂ.ಗಳವರೆಗೆ ಲಂಚವನ್ನು ನೀಡಿದ್ದಾರೆ ಎಂದು ತಮಿಳುನಾಡು ಪೊಲೀಸ್ ಮುಖ್ಯಸ್ಥರಿಗೆ ಬರೆದ ಪತ್ರದಲ್ಲಿ ಇಡಿ ಆರೋಪಿಸಿದೆ. ಆ.6 ರಂದು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಅವರು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ಹಸ್ತಾಂತರಿಸಿದ್ದಾರೆ.

2024-2025 ಮತ್ತು 2025-2026 ವರ್ಷಗಳ ನೇಮಕಾತಿ ಪ್ರಕ್ರಿಯೆಯನ್ನು ಜಾಣ್ಮೆಯಿಂದ ನಿರ್ವಹಿಸಲಾಗಿದೆ ಎಂದು ಜಾರಿ ನಿರ್ದೇಶನಾಲಯ ತಿಳಿಸಿದೆ. ಕೆಲವು ವ್ಯಕ್ತಿಗಳಿಗೆ ಪರೀಕ್ಷಾ ಮಾಹಿತಿ ಮೊದಲೇ ಲಭ್ಯವಿತ್ತು. ಲಂಚದ ಹಣವನ್ನು ನಗದು ರೂಪದಲ್ಲಿ ಸಂಗ್ರಹಿಸಿ ಹವಾಲಾ ಮಾರ್ಗಗಳ ಮೂಲಕ ರವಾನಿಸಲಾಗಿದೆ ಎಂದು ಆರೋಪಿಸಿದೆ.

ಲಂಚ ನೀಡಿದ ಸುಮಾರು 150 ಅಭ್ಯರ್ಥಿಗಳನ್ನು ನೇಮಕ ಮಾಡಲಾಗಿದೆ. ಪೊಲೀಸರಿಗೆ ಬರೆದ ಪತ್ರದಲ್ಲಿ ಹಗರಣದಲ್ಲಿ ಭಾಗಿಯಾಗಿದ್ದಾರೆಂದು ಹೇಳಲಾದ ಹಲವಾರು ಅಧಿಕಾರಿಗಳು ಮತ್ತು ರಾಜಕಾರಣಿಗಳನ್ನು ಇಡಿ ಹೆಸರಿಸಿದೆ.

ರಾಜ್ಯ ಪೊಲೀಸರು ಎಫ್‌ಐಆರ್ ದಾಖಲಿಸಿದ ನಂತರವೇ ಇಡಿ ತನಿಖೆ ಆರಂಭಿಸಬೇಕಾಗುತ್ತದೆ. ಹೀಗಾಗಿ, ಹಗರಣದ ಬಗ್ಗೆ ಪ್ರಕರಣ ದಾಖಲಿಸಿ ತನಿಖೆ ಆರಂಭಿಸುವಂತೆ ತಮಿಳುನಾಡು ಪೊಲೀಸರಿಗೆ ಇಡಿ ಒತ್ತಾಯಿಸಿದೆ.

## ರಫೇಲ್‌ನಲ್ಲಿ ಹಾರಾಟ ನಡೆಸಿ ದಾಖಲೆ ಬರೆದ ರಾಷ್ಟ್ರಪತಿ ದ್ರೌಪದಿ ಮುರ್ಮು



**ನವದೆಹಲಿ:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹರಿಯಾಣದ ಅಂಬಾಲಾ ವಾಯುಪಡೆ ನೆಲೆಯಿಂದ ರಫೇಲ್ ಯುದ್ಧ ವಿಮಾನದಲ್ಲಿ ಹಾರಾಟ ನಡೆಸಿದ್ದಾರೆ.

ಈ ಮೂಲಕ ರಫೇಲ್‌ನಲ್ಲಿ ಹಾರಾಟ ನಡೆಸಿದ ಮೊದಲ ರಾಷ್ಟ್ರಪತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಐದು ತಿಂಗಳ ಹಿಂದೆ, ಪಹಲ್ಗಾಮ್ ದಾಳಿಗೆ ಸೇಡು ತೀರಿಸಿಕೊಳ್ಳಲು ಭಾರತ ಆಪರೇಷನ್ ಸಿಂಧೂರ ನಡೆಸಿತು.

ಇದೇ ವಾಯುನೆಲೆಯಿಂದ ರಫೇಲ್‌ಗಳು ಗಡಿಯುದ್ದಕ್ಕೂ ಭಯೋತ್ಪಾದಕ ಶಿಬಿರಗಳನ್ನು ನಾಶಮಾಡುವ ಕಾರ್ಯಾಚರಣೆ ನಡೆಸಿದ್ದವು.

ಈ ಮೂಲಕ ಭಾರತವು ಭಯೋತ್ಪಾದನಾ ವಿರೋಧಿ ಸಂದೇಶ ರವಾನಿಸಿತ್ತು. ಮುರ್ಮು ಅವರು ಯುದ್ಧ ವಿಮಾನದಲ್ಲಿ ನಡೆಸುತ್ತಿರುವ ಎರಡನೇ ಹಾರಾಟ ಇದು. ಭಾರತದ ಸಶಸ್ತ್ರ ಪಡೆಗಳ ಸುಪ್ರೀಂ ಕಮಾಂಡರ್ 2023ರ ಏಪ್ರಿಲ್ 8 ರಂದು ಅಸ್ಸಾಂನ ತೇಜ್‌ಪುರ ವಾಯುಪಡೆ ನಿಲ್ದಾಣದಲ್ಲಿ ಸುಖೋಯ್-30 ಎಂಕೆಐ ಜೆಟ್‌ನಲ್ಲಿ ಮುರ್ಮು ಹಾರಾಟ ನಡೆಸಿದ್ದರು.

ಹೀಗೆ ಹಾರಾಟ ನಡೆಸಿದ ಮೂರನೇ ರಾಷ್ಟ್ರಪತಿ ಮತ್ತು ಎರಡನೇ ಮಹಿಳಾ ರಾಷ್ಟ್ರಪತಿ ಎನಿಸಿಕೊಂಡರು.

ಮುರ್ಮು ಅವರಿಗಿಂತ ಮೊದಲು, ಮಾಜಿ ರಾಷ್ಟ್ರಪತಿಗಳಾದ ಎಪಿಜೆ ಅಬ್ದುಲ್ ಕಲಾಂ ಮತ್ತು ಪ್ರತಿಭಾ ಪಾಟೀಲ್ ಅವರು ಪುಣೆ ಬಳಿಯ ಲೋಹೆಗಾಂವ್‌ನಲ್ಲಿ ಸುಖೋಯ್-30 ಎಂಕೆಐನಲ್ಲಿ ಹಾರಾಟ ನಡೆಸಿದ್ದರು. ಫ್ರೆಂಚ್ ಏರೋಸ್ಪೇಸ್ ದೈತ್ಯ ಡಸಾಲ್ಟ್ ಏವಿಯೇಷನ್ ತಯಾರಿಸಿದ ರಫೇಲ್‌ನಲ್ಲಿ ಭಾರತದ ರಾಷ್ಟ್ರಪತಿಯೊಬ್ಬರು ಹಾರಾಟ ನಡೆಸಿದ್ದು ಇದೇ ಮೊದಲು.

## ಕೀನ್ಯಾದಲ್ಲಿ ಪ್ರವಾಸಿಗರ ವಿಮಾನ ಪತನ ಸಾವಿನ ಸಂಖ್ಯೆ 12ಕ್ಕೆ ಏರಿಕೆ



**ಕ್ವಾಲೆ, ಕೀನ್ಯಾ :** ಕೀನ್ಯಾದ ಸಿಂಬಾ ಗೊಲಿನಿ ಬಳಿಯ ಕ್ವಾಲೆಯಲ್ಲಿ ಪ್ರವಾಸಿಗರನ್ನು ಹೊತ್ತಿದ್ದ ಲೈಟರ್ ವಿಮಾನವೊಂದು (5Y-CCA) ಪತನಗೊಂಡಿದೆ. ಈ ಘಟನೆಯಲ್ಲಿ ವಿಮಾನದಲ್ಲಿದ್ದ 12 ಮಂದಿ ಪ್ರಯಾಣಿಕರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. ದಿಯಾನಿಯಿಂದ ಟೇಕ್‌ಆಫ್ ಆಗಿ ಕಿಚ್ವ ತೆಂಬೋ ಕಡೆಗೆ ಸಾಗುತ್ತಿದ್ದ ವಿಮಾನವು ಬೆಳಿಗ್ಗೆ 8:30ರ ಸುಮಾರಿಗೆ ಏಕಾಏಕಿ ಪತನಗೊಂಡಿದೆ. ಈ ದುರಂತವನ್ನು ಕೀನ್ಯಾ ಸಿವಿಲ್ ಏವಿಯೇಶನ್ ಅಥಾರಿಟಿ ಖಚಿತಪಡಿಸಿದೆ.

ವಿಮಾನವು ಯಾವುದೇ ತಾಂತ್ರಿಕ ಸಮಸ್ಯೆಯಿಲ್ಲದೆ, ಸಾಮಾನ್ಯ ರೀತಿಯಲ್ಲಿ ಹಾರಾಟ ಆರಂಭಿಸಿತ್ತು. ಆದರೆ, ಅನಿರೀಕ್ಷಿತವಾಗಿ ವಿಮಾನವು ನಿಯಂತ್ರಣ ಕಳೆದುಕೊಂಡು ಭೂಮಿಗೆ ಅಪ್ಪಳಿಸಿದೆ. ಪತನಗೊಂಡ ಕೆಲವೇ ಕ್ಷಣಗಳಲ್ಲಿ ವಿಮಾನದ ಇಂಧನ ಟ್ಯಾಂಕ್‌ನಿಂದ ಬೆಂಕಿ ಕಾಣಿಸಿಕೊಂಡು, ವಿಮಾನವು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದೆ.

ಮಾಹಿತಿ ತಿಳಿಯುತ್ತಿದ್ದಂತೆ, ಸ್ಥಳಕ್ಕೆ ಪೊಲೀಸ್ ತಂಡ, ರಕ್ಷಣಾ ಪಡೆ, ಮತ್ತು ಅಗ್ನಿಶಾಮಕ ದಳ ತಕ್ಷಣ ಧಾವಿಸಿತು. ಆದರೆ, ವಿಮಾನವು ಸಂಪೂರ್ಣವಾಗಿ ಬೆಂಕಿಗೆ ಆಹುತಿಯಾಗಿದ್ದರಿಂದ ಯಾವುದೇ ಪ್ರಯಾಣಿಕರನ್ನು ರಕ್ಷಿಸಲು ಸಾಧ್ಯವಾಗಲಿಲ್ಲ. ಕೀನ್ಯಾ ಸಿವಿಲ್ ಏವಿಯೇಶನ್ ಅಥಾರಿಟಿಯು ಈ ಘಟನೆಯ ಬಗ್ಗೆ ತನಿಖೆ ಆರಂಭಿಸಿದೆ. ಆದರೆ, ಪತನಕ್ಕೆ ನಿಖರ ಕಾರಣ ಇನ್ನೂ ಸ್ಪಷ್ಟವಾಗಿಲ್ಲ. ಪೈಲಟ್‌ಗೆ ಉತ್ತಮ ಹಾರಾಟದ ಅನುಭವವಿತ್ತು, ಮತ್ತು ವಿಮಾನದಲ್ಲಿ ಯಾವುದೇ ತಾಂತ್ರಿಕ ದೋಷ ಕಂಡುಬಂದಿರಲಿಲ್ಲ. ಈ ಎಲ್ಲಾ ಅಂಶಗಳನ್ನು ಪರಿಗಣಿಸಿದರೆ, ಈ ದುರಂತಕ್ಕೆ ಕಾರಣವೇನು ಎಂಬುದು ಸ್ಪಷ್ಟವಾಗಿಲ್ಲ.

## ಸೆರೆ ಸಿಕ್ಕ ಹುಲಿ; ರೈತನ ಹತ್ಯೆಗೈದ ಹುಲಿ ಇದೇನಾ?



**ಮೈಸೂರು :** ಭಾನುವಾರ ಹುಲಿ ದಾಳಿಗೆ ರೈತ ರಾಜಶೇಖರ ಸಾವನ್ನಪ್ಪಿರುವಂತಹ ಘಟನೆ ಮೈಸೂರಿನ ಸರಗೂರು ತಾಲೂಕಿನ ಬೆಣ್ಣೆಗೆರೆ ಗ್ರಾಮದಲ್ಲಿ ನಡೆದಿತ್ತು. ರೈತನನ್ನು ಬಲಿ ಪಡೆದಿದ್ದ ಹುಲಿಯನ್ನು ಹುಡುಕುತ್ತಿದ್ದ ಅರಣ್ಯ ಇಲಾಖೆಯ ಬಲೆಗೆ ಹುಲಿಯೊಂದು ಬಿದ್ದಿದೆ. ಸಾಕಾನೆಗಳ ಸಹಾಯದಿಂದ ಯಡಿಯಾಲ ಅರಣ್ಯ ವಲಯದಲ್ಲಿ ಕಾರ್ಯಾಚರಣೆ ನಡೆಸುತ್ತಿದ್ದ ವೇಳೆ ಸೆರೆ ಹಿಡಿದಿರುವ ಹುಲಿಯನ್ನು ಅರಣ್ಯ ಪ್ರದೇಶಕ್ಕೆ ರವಾನಿಸಲಾಗಿದೆ.

**ಹುಲಿ ಸೆರೆ ಹಿಡಿಯಲು ಸೋಮವಾರದಿಂದ ನಿರಂತರ ಕಾರ್ಯಾಚರಣೆ**

ಕೆಲ ದಿನಗಳ ಹಿಂದೆ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ರೈತ ರಾಜಶೇಖರ್ (58) ಮೇಲೆ ಹುಲಿ ಒಮ್ಮೆಲೆ ದಾಳಿ ಮಾಡಿತ್ತು. ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರದ ಕಾರ್ಯಸೂಚಿ ಅನ್ವಯ ಮೇಲಾಧಿಕಾರಿಗಳ ಆದೇಶದಂತೆ ಅರಣ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಇಲಾಖಾ ಪಶು ವೈದ್ಯಾಧಿಕಾರಿಗಳ ತಂಡ ಒಳಗೊಂಡಂತೆ ಸಾಕಾನೆಗಳೊಂದಿಗೆ ಸದರಿ ಸ್ಥಳದ ಸುತ್ತ-ಮುತ್ತಾ ದಾರಿ ತಪ್ಪಿಸಿ ಹುಲಿಯನ್ನು ಸುರಕ್ಷತೆಯಾಗಿ ಸೆರೆ ಹಿಡಿಯುವ ಕಾರ್ಯಾಚರಣೆಯನ್ನು ಸೋಮವಾರದಿಂದ ನಡೆಸುತ್ತಿತ್ತು. ಹುಲಿಯ ಚಲನ ವಲನವನ್ನು ಅತೀ ಸೂಕ್ಷ್ಮವಾಗಿ ನಿಗಾವಹಿಸಲಾಗುತ್ತಿತ್ತು.

ಈ ಹಂತಕ ಹುಲಿಯನ್ನು ಸೆರೆ ಹಿಡಿಯಲು ಅರಣ್ಯ ಇಲಾಖೆ ಸತತ ಪ್ರಯತ್ನ ಮಾಡುತ್ತಲೇ ಇತ್ತು. ಸಾಕಾನೆಗಳಾದ ಭೀಮ, ಮಹೇಂದ್ರ ಇವರ ಸಹಾಯದಿಂದ ಹುಲಿ ಕಾರ್ಯಾಚರಣೆ ಮುಂದುವರೆದಿತ್ತು. ಮಂಗಳವಾರ ಸಂಜೆ ಯಡಿಯಾಲ ಅರಣ್ಯ ವಲಯದ ಅಂಜನಾಪುರದ ಬಳಿ ಅರಣ್ಯ ಇಲಾಖೆಯ ಅರವಳಿಕೆ ತಜ್ಞ ಶೂಟರ್‌ಗಳ ಸಹಾಯದಿಂದ ಹುಲಿಯನ್ನು ಸೆರೆ ಹಿಡಿಯಲಾಗಿದೆ.

**ಸೆರೆ ಸಿಕ್ಕ ಹುಲಿಗೂ ರೈತನ ಕೊಲೆಗೂ ಏನೂ ಸಂಬಧವಿಲ್ಲ**

ರೈತನ ಮೇಲೆ ದಾಳಿ ಮಾಡಿದ ಸ್ಥಳದಿಂದ 10-15 ಕಿಮೀ ದೂರದಲ್ಲಿ ಈ ಹುಲಿ ಸಿಕ್ಕ ಕಾರಣ ಇದೇ ಹುಲಿ ರೈತನ ಹತ್ಯೆ ಮಾಡಿದೆ ಎಂದು ಊಹಿಸಲಾಗಿತ್ತು. ಸೆರೆ ಸಿಕ್ಕ ಹುಲಿಯನ್ನು ಪರಿಶೀಲಿಸಿರುವಾಗ ಇದು ಸುಮಾರು 7 ವರ್ಷದ ಹೆಣ್ಣು ಹುಲಿಯಾಗಿದ್ದು, ರೈತನ ಮೇಲೆ ದಾಳಿ ಮಾಡಿದ ಹುಲಿ ಇದಲ್ಲ ಎಂದು ತಿಳಿದು ಬಂದಿದೆ. ರಾಜಶೇಖರ್ ಮೇಲೆ ದಾಳಿ ಮಾಡಿದ ಹುಲಿಗಾಗಿ ಶೋಧ ಮುಂದುವರೆದಿದೆ.

**ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟ ದೃಶ್ಯಗಳ ಬಗ್ಗೆ ಇಲಾಖೆ ಸ್ಪಷ್ಟನೆ**

ಅಕ್ಟೋಬರ್ 28 ರಿಂದ ಸಾಮಾಜಿಕ ಜಾಲತಾಣಗಳಲ್ಲಿ ಬೆಣ್ಣೆಗೆರೆ ಗ್ರಾಮದಲ್ಲಿ 3 ಹುಲಿ ಮರಿಗಳು ಸಿಕ್ಕಿರುವುದಾಗಿ ಡ್ರೋನ್‌ನಲ್ಲಿ ಸೆರೆ ಹಿಡಿದ ಕೆಲವು ದೃಶ್ಯಗಳು ಹರಿದಾಡಿದ್ದವು. ಈ ಕುರಿತು ಸ್ಪಷ್ಟನೆ ನೀಡಿರುವ ಅರಣ್ಯ ಇಲಾಖೆ, ಸದರಿ ಚಿತ್ರದಲ್ಲಿರುವ ಹುಲಿ ಮರಿಗಳು ಈ ವಲಯಕ್ಕೆ ಸಂಭಂದಿಸಿರುವುದಿಲ್ಲ ಎಂದು ಹೇಳಿದೆ.

**ಯಶಸ್ವಿ ಕಾರ್ಯಾಚರಣೆಯಿಂದ ಗ್ರಾಮಸ್ಥರ ನಿಟ್ಟುಸಿರು**

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ರೈತರು ಪ್ರತಿಭಟನೆಯನ್ನು ಸಹ ನಡೆಸಿದ್ದರು. ಮೈಸೂರು ಕೆಆರ್ ಆಸ್ಪತ್ರೆ ಶವಾಗಾರದ ಬಳಿ ಆಗಮಿಸಿದ್ದ ಸಚಿವ ಈಶ್ವರ್ ಖಂಡ್ರೆಗೆ ರೈತರು ಘೇರಾವ್ ಹಾಕಿದ್ದರು. ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಮಹದೇವಪ್ಪ ಕೂಡ ಸ್ಥಳಕ್ಕೆ ಭೇಟಿ ನೀಡಿದ್ದರು. ಈ ವೇಳೆ ಪ್ರತಿಭಟನಾಕಾರರು ಸಚಿವ ಈಶ್ವರ್ ಖಂಡ್ರೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ಅರಣ್ಯ ಇಲಾಖೆಯ ಈ ಯಶಸ್ವಿ ಕಾರ್ಯಾಚರಣೆಯಿಂದ ಗ್ರಾಮದ ಜನರು ನಿಶ್ಚಿಂತರಾಗಿದ್ದಾರೆ.

## ಪಿಡಿಓ ಕಿರುಕುಳಕ್ಕೆ ಪಂಚಾಯತ್ ಲೈಬ್ರೆರಿಯನ್ ವಿಷ ಸೇವಿಸಿ ಆತ್ಮಹತ್ಯೆ?




**ನೆಲಮಂಗಲ:** ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಯ ಕಿರುಕುಳಕ್ಕೆ ಬೇಸತ್ತು ಪಂಚಾಯತ್ ಲೈಬ್ರೆರಿಯನ್ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂಬ ಆರೋಪ ಕೇಳಿಬಂದಿದ್ದು, ಬೆಂಗಳೂರು ಹೊರವಲಯ ನೆಲಮಂಗಲ ತಾಲೂಕಿನ ಕಳಲುಘಟ್ಟ ಪಂಚಾಯತ್ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ

ಗ್ರಾಮ ಪಂಚಾಯತ್ ಲೈಬ್ರೆರಿಯನ್ ಆಗಿದ್ದ ರಾಮಚಂದ್ರಯ್ಯ ಆತ್ಮಹತ್ಯೆಗೆ ಶರಣಾದ ವ್ಯಕ್ತಿ, ಕಳೆದ 25 ವರ್ಷದಿಂದ ಅರೆಕಾಲಿಕ ಗ್ರಂಥಾಲಯ ಮೇಲ್ವಿಚಾರಕರಾಗಿ ಕೆಲಸ ಮಾಡುತ್ತಿದ್ದರು ಎಂದು ತಿಳಿದುಬಂದಿದೆ ನೆಲಮಂಗಲ ತಾಲೂಕಿನ ಕಳಲುಘಟ್ಟ ಗ್ರಾಮ ಪಂಚಾಯತಿ PDO ಗೀತಾಮಣಿ ವಿರುದ್ಧ ಕಿರುಕುಳ ಆರೋಪ ಕೇಳಿ ಬಂದಿದೆ. ಕಳೆದ ಮೂರು ತಿಂಗಳಿಂದ ಸಂಬಳ ನೀಡದೇ ಕಿರುಕುಳ ನೀಡುತ್ತಿದ್ದರು. ಜೊತೆಗೆ ಬಯೋಮೆಟ್ರಿಕ್ ಹಾಜರಾತಿ ಹಾಕದೇ, ಇಲ್ಲಸಲ್ಲದ ಕಾರಣ ಹೇಳಿ ನೀಡುತ್ತಿದ್ದ ಕಿರುಕುಳಕ್ಕೆ ಬೇಸತ್ತು ರಾಮಚಂದ್ರಯ್ಯ ಅವರು ವಿಷ ಸೇವನೆ ಮಾಡಿದ್ದಾರೆ. ಒದ್ದಾಡುತ್ತಿದ್ದ ಅವರನ್ನು ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೇ ತುಮಕೂರು ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

ಈ ಸಂಬಂಧ ಮೃತ ರಾಮಚಂದ್ರಯ್ಯ ಅವರ ಅಣ್ಣನ ಮಗ ಪೊಲೀಸ್ ಠಾಣೆಯಲ್ಲಿ ದೂರು ನೀಡಿ ದಾಖಲಿಸಿದ್ದು, ದೂರಿನನ್ವಯ ಪಿಡಿಓ ಗೀತಾಮಣಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ

## ಕಾಗಿನೆಲೆ ಅಭಿವೃದ್ಧಿಗಾಗಿ 34 ಕೋಟಿ ಮೊತ್ತದ ಕ್ರಿಯಾ ಯೋಜನೆಗೆ ಮಂಜೂರಾತಿ




**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಬುಧವಾರ (ಅ.29) ನಡೆದ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರದ 13ನೇ ಸಭೆಯಲ್ಲಿ ಒಟ್ಟು 34 ಕೋಟಿ ರೂ. ಮೊತ್ತದ ಕ್ರಿಯಾ ಯೋಜನೆಗೆ ಮಂಜೂರಾತಿ ನೀಡಲಾಯಿತು.

ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ಮಾತನಾಡಿ, ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲೂಕಿನ ಕನಕದಾಸರ ಕರ್ಮಭೂಮಿ ಕಾಗಿನೆಲೆ ಮತ್ತು ಜನ್ಮಭೂಮಿ ಸ್ಥಳವಾದ ಬಾಡ ಗ್ರಾಮ ಹಾಗೂ ಸುತ್ತಮುತ್ತಲಿನ ಪರಂಪರೆಯ ತಾಣಗಳನ್ನು ಪ್ರವಾಸಿ ಕೇಂದ್ರವಾಗಿ ಅಭಿವೃದ್ಧಿಗೊಳಿಸುವ 34 ಕೋಟಿ ರೂ. ಮೊತ್ತದ ವಿವಿಧ ಯೋಜನೆಗಳ ಕ್ರಿಯಾ ಯೋಜನೆಗೆ ಮಂಜೂರಾತಿ ನೀಡಲಾಯಿತು.

ಕಾಗಿನೆಲೆಯಲ್ಲಿ ಪ್ರತಿ ವರ್ಷ ಕನಕ ಉತ್ಸವವನ್ನು ಆಚರಿಸಲು ಕ್ರಮ ಕೈಗೊಳ್ಳಲಾಗುವುದು. ಉತ್ಸವ ಸಂದರ್ಭದಲ್ಲಿ ಜಿಲ್ಲೆಯ ದಾರ್ಶನಿಕರ ಜೀವನಾದರ್ಶಗಳನ್ನು ಪ್ರತಿಬಿಂಬಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು.

ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಹಾಗೂ ಕನಕ ಅಧ್ಯಯನ ಪೀಠ ಸಮನ್ವಯದಿಂದ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಬೇಕು ಎಂದರು

ಪ್ರಾಧಿಕಾರದಲ್ಲಿ ಸಂಚಿತ ನಿಧಿಯನ್ನು ಸ್ಥಾಪಿಸಿ ಕಾರ್ಯಕ್ರಮಗಳನ್ನು ನಿರಂತರವಾಗಿ ಕೈಗೊಳ್ಳಲು ಕ್ರಮಕೈಗೊಳ್ಳಬೇಕು. ಪ್ರಾಧಿಕಾರದ ಆದಾಯ ಹೆಚ್ಚಳಕ್ಕೆ ಯೋಜನೆಗಳನ್ನು ರೂಪಿಸಬೇಕು.

ಪ್ರಾಧಿಕಾರದ ವ್ಯಾಪ್ತಿಯಲ್ಲಿ ಕಲಾಭವನ ನಿರ್ಮಾಣ, ಕನಕ ವಸ್ತು ಸಂಗ್ರಹಾಲಯದಲ್ಲಿ ಒಳವಸ್ತು ಶಿಲ್ಪ ಸಂಗ್ರಹಾಲಯ ನಿರ್ಮಾಣ, ಚೆನ್ನಕೇಶವ ದೇವಾಲಯ, ಮೆಟ್ಟಿಲು, ಗೋಪುರ, ಕಮಾನುಗಳ ನಿರ್ಮಾಣ, ಕದರಮಂಡಲಗಿ ವೆಂಕಟೇಶ್ವರ ದೇವಸ್ಥಾನ, ಸಮುದಾಯ ಭವನ ನಿರ್ಮಾಣ ಮಾಡಲು ತೀರ್ಮಾನಿಸಲಾಗಿದೆ.

ಪ್ರಾಧಿಕಾರದ ವ್ಯಾಪ್ತಿಯ ಉದ್ಯಾನಗಳ ವಾರ್ಷಿಕ ನಿರ್ವಹಣೆ ಗುತ್ತಿಗೆ ನೀಡುವ ಕುರಿತು ಹಾಗೂ ಕನಕ ಪರಿಸರ ಉದ್ಯಾನದಲ್ಲಿ ಖಾಲಿಯಿರುವ ಜಾಗದಲ್ಲಿ ಬಟಾನಿಕಲ್ ಗಾರ್ಡನ್ ನಿರ್ಮಿಸಲು ನಿರ್ಧರಿಸಲಾಯಿತು. ಕಾಗಿನೆಲೆ ಗ್ರಾಮದ ವ್ಯಾಪ್ತಿಯಲ್ಲಿ ಇತರ ಅಭಿವೃದ್ಧಿ ಕಾಮಗಾರಿಗಳನ್ನು ಶೀಘ್ರ ಕೈಗೊಳ್ಳಲು ಚರ್ಚಿಸಲಾಯಿತು ಎಂದು ತಿಳಿಸಿದರು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಸಚಿವರಾದ ಶಿವಾನಂದ ಪಾಟೀಲ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ ರೇವಣ್ಣ, ಪ್ರಾಧಿಕಾರದ ಅಧಿಕಾರಿಗಳು ಉಪಸ್ಥಿತರಿದ್ದರು

## ಮೆಕ್ಕೆಜೋಳ ವ್ಯಾಪಾರಿಗಳಿಗೆ ವಂಚನೆ: ಜಮೀರ್ ಅಹಮದ್ ವಿರುದ್ಧ ರೈತರು ಆಕ್ರೋಶ



**ಚಿಕ್ಕಬಳ್ಳಾಪುರ:** ಜಮೀರ್ ಅವರ ಆಪ್ತ ಸೈಯದ್ ಅಬ್ದುಲ್ ಅಕ್ಟರ್ ಪಾಷಾ, ರೈತರಿಂದ ಮೆಕ್ಕೆಜೋಳ ಖರೀದಿಸಿ ಕೋಟ್ಯಂತರ ರೂಪಾಯಿ ವಂಚನೆ ಮಾಡಿದ್ದಾನೆ ಎಂದು ರೈತರು ದೂರಿದ್ದಾರೆ. ಈ ಸಂಬಂಧ ಸಚಿವ ಜಮೀರ್, ಪೊಲೀಸ್ ಇನ್ಸ್‌ಪೆಕ್ಟರ್‌ಗೆ ಕರೆ ಮಾಡಿ ಆರೋಪಿಗೆ ಸಹಾಯ ಮಾಡಲು ಸೂಚಿಸಿದ್ದಾರೆ ಎನ್ನಲಾದ ಆಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಚಿಕ್ಕಬಳ್ಳಾಪುರ ತಾಲೂಕಿನ ದಿಗೂರು ನಿವಾಸಿ ಡಿ. ಎನ್. ರಾಮಕೃಷ್ಣ ಎಂಬ ಪಾಪ್‌ಕಾರ್ನ್ ಉದ್ಯಮಿ, ತೆಲಂಗಾಣದ ಹೈದರಾಬಾದ್ ಮೂಲದ ಎಚ್‌ಕೆಜಿಎನ್ ಮುಸ್ಕಾನ್ ಪಾಪ್‌ಕಾರ್ನ್ ಟ್ರೇಡರ್ಸ್‌ನ ಮಾಲೀಕರಾದ ಸೈಯದ್ ಅಬ್ದುಲ್ ರಜಾಕ್, ಸೈಯದ್ ಅಬ್ದುಲ್ ಅಕ್ಟರ್ ಪಾಷಾ ಮತ್ತು ನಾಸಿರ್ ಅಹಮದ್ ಎಂಬ ಸಹೋದರರಿಗೆ 1 ಕೋಟಿ 89 ಲಕ್ಷ ರೂಪಾಯಿ ಮೌಲ್ಯದ ಪಾಪ್‌ಕಾರ್ನ್ ಜೋಳವನ್ನು ಸರಬರಾಜು ಮಾಡಿದ್ದರು. ಆದರೆ, ಹೈದರಾಬಾದ್‌ನ ವ್ಯಾಪಾರಿಗಳು ಈ ಜೋಳದ ಹಣವನ್ನು ಪಾವತಿಸದೇ ವಂಚನೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಈ ಕಾರಣಕ್ಕಾಗಿ ರಾಮಕೃಷ್ಣ ಅವರು ಚಿಕ್ಕಬಳ್ಳಾಪುರದ ಪೆರೇಸಂದ್ರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ, ನ್ಯಾಯಕ್ಕಾಗಿ ಕಾಯುತ್ತಿದ್ದಾರೆ.

ಪೆರೇಸಂದ್ರ ಪೊಲೀಸ್ ಠಾಣೆಯ ಪಿಎಸ್‌ಐ ಜಗದೀಶ್ ರೆಡ್ಡಿ, ಆರೋಪಿ ಸೈಯದ್ ಅಬ್ದುಲ್ ಅಕ್ಟರ್ ಪಾಷಾನನ್ನು ಬಂಧಿಸಿ ವಿಚಾರಣೆ ನಡೆಸುತ್ತಿರುವಾಗ, ಸಚಿವ ಜಮೀರ್ ಅಹಮದ್ ಖಾನ್ ಅವರು ಪೊಲೀಸರಿಗೆ ಕರೆ ಮಾಡಿ ಸಹಾಯ ಮಾಡಿ, ಇವರು ಬಹಳ ಬೇಕಾದವರು ಎಂದು ಮನವಿ ಮಾಡಿದ್ದಾರೆ ಎನ್ನಲಾದ ಆಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ. ಈ ಆಡಿಯೋ ಕರೆಯಿಂದ ರೈತರ ಆಕ್ರೋಶ ಮತ್ತಷ್ಟು ಉಲ್ಬಣಗೊಂಡಿದೆ. ರೈತರು, ಜಮೀರ್ ಅವರು ಮಧ್ಯಸ್ಥಿಕೆ ವಹಿಸದೇ ಇದ್ದಿದ್ದರೆ, ನಮಗೆ ನ್ಯಾಯ ಸಿಗುತ್ತಿತ್ತು ಮತ್ತು ಹಣ ವಾಪಸ್ ಬರುತ್ತಿತ್ತು ಎಂದು ಆರೋಪಿಸಿದ್ದಾರೆ.

## ಸರಿಯಾದ ಸಮಯಕ್ಕೆ ಬ್ಲೌಸ್ ಕೊಡದ ಟೈಲರ್: 7 ಸಾವಿರ ದಂಡ ವಿಧಿಸಿದ ಕೋರ್ಟ್

**ಗುಜರಾತ್:**: ಸಮಯಕ್ಕೆ ಸರಿಯಾಗಿ ಬ್ಲೌಸ್ ಹೊಲಿಯದ ಟೈಲರ್‌ಗೆ ಗ್ರಾಹಕ ನ್ಯಾಯಾಲಯವು 7,000 ರೂಪಾಯಿ ದಂಡ ವಿಧಿಸಿದ ಘಟನೆ ಗುಜರಾತ್‌ನ ಅಹಮದಾಬಾದ್‌ನಲ್ಲಿ ನಡೆದಿದೆ. ಇದರ ಜೊತೆಗೆ, ಮಹಿಳೆಯೊಬ್ಬರು ಮುಂಗಡವಾಗಿ ಪಾವತಿಸಿದ್ದ 4,395 ರೂಪಾಯಿಯನ್ನು ಬಡ್ಡಿಯೊಂದಿಗೆ ಮರುಪಾವತಿಸಲು ಆದೇಶಿಸಲಾಗಿದೆ.

ಒಬ್ಬ ಮಹಿಳೆ ತನ್ನ ಮದುವೆಗಾಗಿ ಬ್ಲೌಸ್ ಹೊಲಿಯಲು ಸ್ಥಳೀಯ ಟೈಲರ್‌ಗೆ ಒಪ್ಪಿಸಿದ್ದರು. ಬಟ್ಟೆಯನ್ನು ಕೊಡುವಾಗ, ನಿಗದಿತ ಸಮಯಕ್ಕೆ ಸರಿಯಾಗಿ ಒದಗಿಸುವಂತೆ ಮಹಿಳೆ ಒತ್ತಾಯಿಸಿದ್ದರು. ಟೈಲರ್ ಕೂಡ ಈ ಭರವಸೆಯನ್ನು ನೀಡಿ, ಮುಂಗಡವಾಗಿ 4,395 ರೂಪಾಯಿಯನ್ನು ಸ್ವೀಕರಿಸಿದ್ದರು. ಆದರೆ, ಒಪ್ಪಂದದ ಸಮಯಕ್ಕೆ ಮಹಿಳೆ ಬಟ್ಟೆಯನ್ನು ಪಡೆಯಲು ಟೈಲರ್ ಬಳಿಗೆ ತೆರಳಿದಾಗ, ಬ್ಲೌಸ್ ಸರಿಯಾಗಿ ಹೊಲಿದಿರಲಿಲ್ಲ. ಅಳತೆಯಲ್ಲಿ ತಪ್ಪಿದ್ದ ಬಟ್ಟೆಯನ್ನು ಕಂಡು ಮಹಿಳೆ ನಿರಾಸೆಗೊಂಡರು.

ಈ ತಪ್ಪನ್ನು ಸರಿಪಡಿಸಲು ಟೈಲರ್‌ಗೆ ಮತ್ತೊಂದು ಗಡುವು ನೀಡಲಾಯಿತು. ಆದರೆ, ಎರಡನೇ ಬಾರಿಯೂ ಟೈಲರ್ ಸರಿಯಾಗಿ ಕೆಲಸ ಮಾಡದೆ, ಬಟ್ಟೆಯನ್ನು ಒದಗಿಸುವಲ್ಲಿ ವಿಳಂಬ ಮಾಡಿದರು. ಇದರಿಂದ ಕೋಪಗೊಂಡ ಮಹಿಳೆ, ಟೈಲರ್‌ಗೆ ಕಾನೂನು ನೋಟಿಸ್ ಜಾರಿ ಮಾಡಿದರು. ಆದರೂ ಯಾವುದೇ ಪ್ರತಿಕ್ರಿಯೆ ಬಾರದ ಕಾರಣ, ಅವರು ಗ್ರಾಹಕ ವಿವಾದ ಪರಿಹಾರ ಆಯೋಗದ ಮೊರೆ ಹೋದರು.

ಗ್ರಾಹಕ ನ್ಯಾಯಾಲಯದಲ್ಲಿ ವಿಚಾರಣೆ ನಡೆದಾಗ, ಟೈಲರ್ ಹಾಜರಾಗದಿರುವುದು ಆಯೋಗದ ಗಮನಕ್ಕೆ ಬಂದಿತು. ಟೈಲರ್‌ನ ನಿರ್ಲಕ್ಷ್ಯದ ವರ್ತನೆಯನ್ನು ಗಂಭೀರವಾಗಿ ಪರಿಗಣಿಸಿದ ಆಯೋಗ, ಗ್ರಾಹಕರಿಗೆ ಉಂಟಾದ ತೊಂದರೆಗೆ ಪರಿಹಾರವಾಗಿ ದಂಡ ವಿಧಿಸಿತು. ನ್ಯಾಯಾಲಯವು ಟೈಲರ್‌ಗೆ 4,395 ರೂಪಾಯಿಯನ್ನು ಬಡ್ಡಿಯೊಂದಿಗೆ ಮರುಪಾವತಿಸಲು ಆದೇಶಿಸಿತು. ಇದರ ಜೊತೆಗೆ, ಮಾನಸಿಕ ಒತ್ತಡ ಮತ್ತು ಕಾನೂನು ವೆಚ್ಚಕ್ಕಾಗಿ 7,000 ರೂಪಾಯಿ ಹೆಚ್ಚುವರಿ ಪರಿಹಾರವನ್ನು ಒದಗಿಸುವಂತೆ ತೀರ್ಪು ನೀಡಿತು.

## ಮರಕ್ಕೆ ಕಟ್ಟಿ, ವಿವಸ್ತ್ರಗೊಳಿಸಿ ಶಿಕ್ಷಕಿ ಮೇಲೆ ಅತ್ಯಾಚಾರಕ್ಕೆ ಯತ್ನ

**ಚಿಕ್ಕಮಗಳೂರು:** ಪ್ರಾಥಮಿಕ ಶಾಲೆಯ ಅತಿಥಿ ಶಿಕ್ಷಕಿಯನ್ನು ಮರಕ್ಕೆ ಕಟ್ಟಿ ವಿವಸ್ತ್ರಗೊಳಿಸಿ ಅತ್ಯಾಚಾರಕ್ಕೆ ಯತ್ನಿಸಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ಕೊಗ್ರೆ ಗ್ರಾಮದಲ್ಲಿ ನಡೆದಿದೆ.

ಸಂತ್ರಸ್ತ ಯುವತಿ ಬಸರೀಕಟ್ಟೆ ಗ್ರಾಮದ ಶಾಲೆಯೊಂದರಲ್ಲಿ ಅತಿಥಿ ಶಿಕ್ಷಕಿಯಾಗಿ ಕಾರ್ಯ ನಿರ್ವಹಿಸುತ್ತಿದ್ದರು. ನಿತ್ಯ ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ಕೊಗ್ರೆ ಗ್ರಾಮದಿಂದ ಬಸರೀಕಟ್ಟೆ ಗ್ರಾಮಕ್ಕೆ ಹೋಗಿ ಬರುತ್ತಿದ್ದರು. ಮಂಗಳವಾರ (ಅ.28) ಅದೇ ರೀತಿ ಕೆಲಸ ಮುಗಿಸಿ ಮನೆಗೆ ವಾಪಸ್ಸಾಗುತ್ತಿದ್ದರು. ಈ ವೇಳೆ ನಾಲ್ಕೈದು ಯುವಕರ ಗುಂಪು ದಾರಿಯಲ್ಲಿ ಕಾಯುತ್ತಾ ನಿಂತಿದ್ದರು.

ಶಿಕ್ಷಕಿ ಬರುತ್ತಿದ್ದಂತೆ ಅವರ ಮೇಲೆ ಎರಗಿ ದೌರ್ಜನ್ಯ ಎಸಗಿದ್ದು, ಬಳಿಕ ಅಡಿಕೆ ಮರಕ್ಕೆ ಕಟ್ಟಿ ವಿವಸ್ತ್ರಗೊಳಿಸಿ ಅತ್ಯಾಚಾರಕ್ಕೆ ಮುಂದಾಗಿದ್ದಾರೆ. ಕಿರುಚಿಕೊಳ್ಳುತ್ತಿದಂತೆ ಬಾಯಿಗೆ ಮಣ್ಣು ಹಾಕಿ ವಿಕೃತಿ ಮೆರೆದಿದ್ದಾರೆ. ಆದರೂ ಶಿಕ್ಷಕಿ ಕಿರುಚಿದ ಶಬ್ದ ಕೇಳಿಸಿಕೊಂಡ ಸ್ಥಳೀಯರು ಸ್ಥಳಕ್ಕೆ ಬಂದಿದ್ದಾರೆ. ಜನರು ಬರುತ್ತಿದ್ದಂತೆ ಆರೋಪಿಗಳು ಕಬ್ಬಿಣ ರಾಡ್‌ನಿಂದ ಶಿಕ್ಷಕಿ ತಲೆಗೆ ಹೊಡೆದು ಸ್ಥಳದಿಂದ ಕಾಲ್ಕಿತ್ತಿದ್ದಾರೆ ಅದೃಷ್ಟಾವಶಾತ್ ಸಾವಿನಿಂದ ಪಾರಾಗಿದ್ದು, ತೀವ್ರ ರಕ್ತಸ್ರಾವದಿಂದ ಬಳಲುತ್ತಿದ್ದರು. ಕೂಡಲೇ ಶಿಕ್ಷಕಿಯನ್ನು ಕೊಪ್ಪ ತಾಲೂಕು ಆಸ್ಪತ್ರೆಗೆ ದಾಖಲಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಶಿವಮೊಗ್ಗ ಜಿಲ್ಲೆಯ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಈ ಸಂಬಂಧ ಕೊಪ್ಪ ತಾಲೂಕಿನ ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ ತನಿಖೆ ಕೈಗೆತ್ತಿಕೊಂಡ ಪೊಲೀಸರು ಸದ್ಯ ಬಾಳೆಹೊನ್ನೂರು ಮೂಲದ ಭವಿತ್ (24) ಎಂಬಾತನನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಸಂತ್ರಸ್ತ ಯುವತಿ ಪ್ರೀತಿ ನಿರಾಕರಿಸಿ, ಎರಡು ತಿಂಗಳಿನಿಂದ ಆತನ ಮೊಬೈಲ್ ನಂಬರ್‌ನ್ನು ಬ್ಲಾಕ್ ಮಾಡಿದ್ದಳು. ಹೀಗಾಗಿ ದುಷ್ಕೃತ್ಯ ಎಸಗಿದ್ದಾನೆ ಎಂಬ ಶಂಕೆ ವ್ಯಕ್ತವಾಗಿದೆ

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

